# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1082 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ಸಿ.ವೇಣುಗೋಪಾಲ್ (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 19/12/2018 |
| 4) | ಉತ್ತರಿಸುವವರು | ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಸ್ವಂತ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳು ಇಲ್ಲದಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ವಿಜಯಪುರ ಜಿಲ್ಲೆಯ ಇಂಡಿ ಕೈಗಾರಿಕಾ ತರಬೇತಿ ಸಂಸ್ಥೆಯು ಡಿ.ಜಿ.ಇ.ಟಿ ನಿಯಮಾನುಸಾರ ಮೂಲಭೂತ ಸೌಕರ್ಯಗಳನ್ನು ಹೊಂದಿದ ಖಾಸಗಿ ಮಾಲೀಕತ್ವದ ಕಟ್ಟಡವನ್ನು ಬಾಡಿಗೆ ಆಧಾರದಲ್ಲಿ ಪಡೆದು ತರಬೇತಿಗೆ ತೊಂದರೆಯಾಗದಂತೆ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದೆ. ಸದರಿ ಸಂಸ್ಥೆಗೆ ನಬಾರ್ಡ್ ಆರ್.ಐ.ಡಿ.ಎಫ್-22 ಯೋಜನೆಯಡಿಯಲ್ಲಿ ಸ್ವಂತ ಕಟ್ಟಡ ಹೊಂದಲು ಕ್ರಮಕೈಗೊಂಡಿದ್ದು, ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅಡಚಣೆಯಾಗದಂತೆ ಕ್ರಮವಹಿಸಲಾಗಿದೆ. |
| ಆ) | ಸದರಿ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನ ಮಂಜೂರು ನೀಡಲಾಗಿದೆಯೇ:ಮಂಜೂರಾದ ಅನುದಾನ ಎಷ್ಟು; | ಸದರಿ ಸಂಸ್ಥೆಯ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ರೂ.1.40 ಕೋಟಿಗಳು ಮಂಜೂರಾಗಿದ್ದು, ಈಗಾಗಲೇ ರೂ.70.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |
| ಇ) | ಮಂಜೂರಾತಿ ನೀಡಿದ್ದು ಯಾವಾಗ: ಸದರಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭ ಮಾಡಿಲಾಗಿದೆಯೇ; ಸದರಿ ಕಾಮಗಾರಿಯನ್ನು ಯಾವ ಏಜೆನ್ಸಿಯವರಿಗೆ ನೀಡಲಾಗಿದೆ: ಪೂರ್ಣಗೊಳಿಸುವುದು ಯಾವಾಗ? (ವಿವರ ನೀಡುವುದು) | ಸರ್ಕಾರದ ದಿನಾಂಕ: 03/03/2017ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ದಿನಾಂಕ: 17.04.2018ರಲ್ಲಿ ಕಾಮಗಾರಿಯನ್ನು ಕರ್ನಾಟಕ ಗೃಹಮಂಡಳಿಗೆ ವಹಿಸಲಾಗಿದೆ. ಕಟ್ಟಡ ಕಾಮಗಾರಿಯು ಪ್ರಗತಿಯಲ್ಲಿದೆ. |

**ಸಂಖ್ಯೆ: ಕೌಉಜೀಇ 91 ಕೈತಪ್ರ 2018**

(ಆರ್.ವಿ. ದೇಶಪಾಂಡೆ)
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು